ಶ್ರೀಲಂಕಾ ಎದುರು ಸೋಲು ಕಂಡಿತ್ತು. 2016ರ ಸೆಮಿಫೈನಲ್‌ನಲ್ಲಿ ಆ ವರ್ಷದ ಚಾಂಪಿಯನ್ಸ್ ವೆಸ್ಟ್ ಇಂಡೀಸ್ ವಿರುದ್ಧ ಮತ್ತು ಹಿಂದಿನ 2022ರ ಟೂರ್ನಿಯಲ್ಲಿ ಹಾಲಿ ಚಾಂಪಿಯನ್ ಇಂಗ್ಲೆಂಡ್ ವಿರುದ್ಧ ಪರಾಭವಗೊಂಡಿತ್ತು.

ಘಟಾನುಘಟಿ ಆಟಗಾರರನ್ನು ಒಳಗೊಂಡಿರುವ ಭಾರತ ತಂಡದಲ್ಲಿ ಈ ಬಾರಿಯೂ ಟ್ರೋಫಿ ತಂದುಕೊಡಬಲ್ಲ ಸಾಮರ್ಥ್ಯವುಳ್ಳ ಪ್ರಚಂಡ ಆಟಗಾರರು ಇದ್ದಾರೆ. ರೋಹಿತ್ ಶರ್ಮಾ ನಾಯಕತ್ವದ ಹಾಗೂ ಹಾರ್ದಿಕ್ ಪಾಂಡ್ಯ ಉಪನಾಯಕತ್ವದ ತಂಡದಲ್ಲಿ ಯಶಸ್ವಿ ಜೈಸ್ವಾಲ್, 'ರನ್ ಯಂತ್ರ' ವಿರಾಟ್ ಕೊಹ್ಲಿ, ಸೂರ್ಯಕುಮಾರ್ ಯಾದವ್, ರಿಷಬ್ ಪಂಥ್, ಸಂಜು ಸ್ಯಾಮ್ಸನ್, ಶಿವಂ ದುಬೆ, ರವೀಂದ್ರ ಜಡೇಜ ಅಕ್ಷರ್ ಪಟೇಲ್, ಕುಲದೀಪ್ ಯಾದವ್, ಯಜುವೇಂದ್ರ ಚಹಾಲ್, ಅರ್ಷದೀಪ್ ಸಿಂಗ್, ಜಸ್‌ಪ್ರೀತ್ ಬೂಮ್ರಾ ಮತ್ತು ಮೊಹಮ್ಮದ್ ಸಿರಾಜ್ ಸ್ಥಾನ ಪಡೆದಿದ್ದಾರೆ. ಶುಭಮನ್ ಗಿಲ್, ರಿಂಕು ಸಿಂಗ್, ಖಲೀಲ್ ಅಹಮದ್, ಆವೇಶ್ ಖಾನ್ ಮೀಸಲು ಆಟಗಾರರಾಗಿದ್ದಾರೆ.

## ಭಾರತದ ಬ್ಯಾಟಿಂಗ್ ಶಕ್ತಿಗೆ ಕೊಹ್ಲಿ, ರೋಹಿತ್ ಬಲ

ಚುರುಕಿನ ಫೀಲ್ಡಿಂಗ್, ಆಕ್ರಮಣಕಾರಿ ಬ್ಯಾಟಿಂಗ್ ಮೂಲಕ ಹೆಸರಾದ ವಿರಾಟ್ ಕೊಹ್ಲಿ ಭಾರತದ


ವೆಸ್ಟ್ ಇಂಡೀಸ್‌ನ ಡರೇನ್ ಸ್ಯಾಮಿ ಕ್ರಿಕೆಟ್ ಮೈದಾನ

ಅಡಿಲೇಡ್ ಓವಲ್‌ನಲ್ಲಿ ಐಸಿಸಿ ಟಿ20 ವಿಶ್ವಕಪ್ 2022ರ ಸೆಮಿಫೈನಲ್ ಪಂದ್ಯದಲ್ಲಿ ಇಂಗ್ಲೆಂಡ್ ವಿರುದ್ಧ ಸೋತು ಪೆವಿಲಿಯನ್‌ನತ್ತ ಹೆಜ್ಜೆ ಹಾಕಿದ ಭಾರತ ತಂಡ

